ಅನುಬಂಧ – I

G.T.T.C ಕೇಂದ್ರ ಮದ್ದೂರು ಇದರ ಕಟ್ಟಡ ನಿರ್ಮಾಣ :

436 (5116) ಶ್ರೀ ತಮ್ಮಣ್ಣ ಡಿ.ಸಿ. (ಮದ್ದೂರು) :– ಮಾನ್ಯ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ಮದ್ದೂರು ಪಟ್ಟಣದಲ್ಲಿ ಜಿ.ಟಿ.ಟಿ.ಸಿ. ಕೇಂದ್ರ ಕಟ್ಟಡ ನಿರ್ಮಿಸಲು, ಈಗಾಗಲೇ ಆಡಳಿತಾತ್ಮಕ ಮಂಜೂರಾತಿ ನೀಡಿ 2 ವರ್ಷವಾಗಿದ್ದು ಕಟ್ಟಡ ನಿರ್ಮಾಣಕ್ಕೆ ಅನುದಾನ ಒದಗಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ;

ಆ) ಸದರಿ ಕಟ್ಟಡ ನಿರ್ಮಾಣವನ್ನು ಕೈಗೆತ್ತಿಕೊಳ್ಳಲು ಸರ್ಕಾರದ ನಿಲುವೇನು?

ಶ್ರೀ ಪಿ.ಜಿ. ಆರ್ ಸಿಂಧ್ಯಾ (ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಸಚಿವರು)

ಅ) ಮದ್ದೂರು ತಾಲ್ಲೂಕಿನ ಸೋಮನಹಳ್ಳಿ ಗ್ರಾಮದಲ್ಲಿರುವ ಕೃಷಿ ಇಲಾಖೆಗೆ ಸೇರಿದ 5.00 ಎಕರೆ ಪ್ರದೇಶವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಯು ಸರ್ಕಾರಿ ಆದೇಶ ದಿನಾಂಕ 23.11.2002ರಲ್ಲಿ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಸಂಸ್ಥೆ ಇವರಿಗೆ ಹಸ್ತಾಂತರಿಸಲಾಗುತ್ತದೆ. ಸದರಿ ಜಾಗದಲ್ಲಿ ಕೇಂದ್ರದ ಆಡಳಿತ ಕಟ್ಟಡ, ಅಧ್ಯಯನ ಕೊಠಡಿ, ವರ್ಕ್ ಶಾಪ್ ಇತ್ಯಾದಿ ಕಟ್ಟಡ ನಿರ್ಮಾಣಕ್ಕಾಗಿ ದಿನಾಂಕ 28.2.2004 ರಂದು ಆಡಳಿತಾತ್ಮಕ ಅನುಮೋದನೆ ನೀಡಿದ್ದರು ಸಹ ಅನುದಾನ ಒದಗಿಸದೆಯಿರುವುದರಿಂದ ಕಟ್ಟಡ ನಿರ್ಮಾಣದ ಕಾಮಗಾರಿ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಆದರೆ 2005–06ನೇ ಸಾಲಿನಲ್ಲಿ ಕಟ್ಟಡದ ಕಾಮಗಾರಿ ಕೆಲಸವನ್ನು ಪ್ರಾರಂಭಿಸಲಾಗುವುದು.

ಆ) 2005–06ನೇ ಸಾಲಿನಲ್ಲಿ ಕಟ್ಟಡದ ಕಾಮಗಾರಿ ಕೆಲಸವನ್ನು ಪ್ರಾರಂಭಿಸಲಾಗುವುದು.

ಪಶುವೈದ್ಯ ಆಸ್ಪತ್ರೆಗಳನ್ನು ಹೊಸದಾಗಿ ತೆರೆಯುವುದು :

437 (5265) ಶ್ರೀ ಕಿರಣ್ ಕುಮಾರ್ ಕೆ.ಎಸ್. (ಕಳ್ಳಂಬೆಳ್ಳ) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿರುವ ಒಟ್ಟು ಪಶುವೈದ್ಯಕೀಯ ಆಸ್ಪತ್ರೆಗಳು ಮತ್ತು ಚಿಕಿತ್ಸಾ ಕೇಂದ್ರಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು);

ಆ) ಈ ಸಾಲಿನಲ್ಲಿ ಹೊಸದಾಗಿ ಪಶು ಚಿಕಿತ್ಸಾ ಕೇಂದ್ರಗಳು ಮತ್ತು ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಮಂಜೂರು ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ;